# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2015 |
| ಉತ್ತರಿಸಬೇಕಾದ ದಿನಾಂಕ | : | 24.03.2021 |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರೈತರ ಪಹಣಿ ಪತ್ರವನ್ನು ದಾಖಲಿಸುವಾಗ ಸಿಬ್ಬಂದಿಯಿಂದಾದ ತಪ್ಪಿನಿಂದ ರೈತರಿಗೆ ತೊಂದರೆಯಾಗಿದ್ದು, ಸರಿಪಡಿಸುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ | ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಕಾಲಮಿತಿಯನ್ನು ವಿಧಿಸುವ ಮತ್ತು ವ್ಯವಸ್ಥೆಯನ್ನು ಸರಳೀಕೃತಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು) | ದೋಷ ಪೂರಿತ ಆರ್‌ಟಿಸಿ ತಿದ್ದುಪಡಿ ಪ್ರಕರಣಗಳನ್ನು ವಿಲೇವಾರಿ ಮಾಡಲು ಸಂಬಂಧಪಟ್ಟ ಜಿಲ್ಲೆಗಳ ಉಪ ವಿಭಾಗಾಧಿಕಾರಿರವರಿಗೆ ಅಧಿಕಾರವಿರುತ್ತದೆ, ಸದರಿ ಪ್ರಕರಣಗಳನ್ನು ತ್ವರಿತವಾಗಿ ವಿಲೇಗೊಳಿಸಲು 2014 ನೇ ಸಾಲಿನಿಂದ ಕಂದಾಯ ಅದಾಲತ್‌ನ್ನು ಅನುಷ್ಠಾನಗೊಳಿಸಿ ಸದರಿ ಅಧಿಕಾರವನ್ನು ಕೆಲವು ನಿರ್ಬಂಧಗಳೊಂದಿಗೆ ಆಯಾ ತಾಲ್ಲೂಕಿನ ತಹಶೀಲ್ದಾರ್ ರವರುಗಳಿಗೆ ಪ್ರತ್ಯಾಯೋಜಿಸಲಾಗಿರುತ್ತದೆ. ಹಾಗೂ ದೋಷಪೂರಿತ ಪಹಣಿಗಳನ್ನು ವಿಲೇವಾರಿ ಮಾಡಲು ಹಮ್ಮಿಕೊಂಡಿರುವ ಕಂದಾಯ ಅದಾಲತ್ ಕಾರ್ಯಕ್ರಮವು 31.12.2021 ರವರೆಗೆ ಕಾರ್ಯರೂಪದಲ್ಲಿರುತ್ತದೆ. |

ಕಂಇ 68 ಎಂ ಆರ್ ಆರ್ 2021

(ಆರ್. ಅಶೋಕ)
ಕಂದಾಯ ಸಚಿವರು